ಚಿಕ್ಕ ಮಗಳೂರು ಜಿಲ್ಲೆಯಲ್ಲಿನ ಪ್ರಥಮ ದರ್ಜೆ ಕಾಲೇಜುಗಳ ಬಗ್ಗೆ

೫೭೦ ಶ್ರೀ ಬಿ. ಆರ್. ನೀಲಕಂಠಪ್ಪ (ತರೀಕೆರೆ).—ಮಾನ್ಯ ಉನ್ನತ ಶಿಕ್ಷಣ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಚಿಕ್ಕ ಮಗಳೂರು ಜಿಲ್ಲೆಯಲ್ಲಿರುವ ಪ್ರಥಮದರ್ಜೆ ಕಾಲೇಜುಗಳ ಸಂಖ್ಯೆ ಎಷ್ಟು ?

ಆ) ಈ ಪೈಕಿ ವಿಜ್ಞಾನ ಕಾಲೇಜುಗಳ ಸಂಖ್ಯೆ ಎಷ್ಟು ?

ಇ) ತರೀಕೆರೆ ಮತ್ತು ಅಜ್ಜಂಪುರದಲ್ಲಿ ಪ್ರಥಮ ದರ್ಜೆ ಕಾಲೇಜು ತೆರೆಯಬೇಕೆಂದು ಸರ್ಕಾರದವರ ಗಮನಕ್ಕೆ ಬಂದಿದೆಯೇ ?

ಈ) ಹಾಗಿದ್ದಲ್ಲಿ ಈ ಬಗ್ಗೆ ಸರ್ಕಾರದವರು ಕೈಗೊಂಡ ಕ್ರಮವೇನು ?

ಶ್ರೀ ಜೀವರಾಜ ಆಳ್ವ (ಉನ್ನತ ಶಿಕ್ಷಣ ಮಂತ್ರಿಗಳು).—

ಅ) ಒಟ್ಟು ೯ ಪ್ರಥಮ ದರ್ಜೆ ಕಾಲೇಜುಗಳಿವೆ. (ಸರ್ಕಾರಿ ಕಾಲೇಜುಗಳು–೪ ಅನುದಾನ ಪಡೆಯುತ್ತಿರುವ ಖಾಸಗೀ ಕಾಲೇಜುಗಳು–೪ ಮತ್ತು ಅನುದಾನ ಪಡೆಯದ ಖಾಸಗೀ ಕಾಲೇಜು–೧)

ಆ) ಈ ಪೈಕಿ ವಿಜ್ಞಾನ ಕಾಲೇಜುಗಳ ಸಂಖ್ಯೆ. ೨

೧) ಸರ್ಕಾರಿ ವಿಜ್ಞಾನ ಕಾಲೇಜು, ಚಿಕ್ಕ ಮಗಳೂರು.

೨) ಜೆ. ಸಿ. ಪಿ. ಎಂ. ಕಾಲೇಜು, ಶೃಂಗೇರಿ

೩) ಬಂದಿದೆ.

ಈ) ೧೯೮೬–೮೭ನೇ ಸಾಲಿನಲ್ಲಿ ಯಾವುದೇ ಪ್ರಥಮ ದರ್ಜೆ ಕಾಲೇಜುಗಳನ್ನು ಮಂಜೂರು ಮಾಡಬಾರದೆಂದು ಸರ್ಕಾರ ತೀರ್ಮಾನ ಕೈಗೊಂಡಿದ್ದರಿಂದ ಅಜ್ಜಂಪುರ ಮತ್ತು ತರೀಕೆರೆಯಲ್ಲಿ ಕಾಲೇಜುಗಳನ್ನು ಸ್ಥಾಪನೆ ಮಾಡಲಾಗಲಿಲ್ಲ.

ಮ್ಯಾಕಲವಂಡ್ಡಿ ನೀರಾವರಿ ಕೆರೆ ಕೆಲಸ ಪ್ರಾರಂಭಿಸುವ ಬಗ್ಗೆ

೫೧೮ ಶ್ರೀ ಶಿವಾನಂದ ಹೆಚ್. ಕೌಜಲಗಿ (ಬೈಲಹೊಂಗಲ).—ಮಾನ್ಯ ಲೋಕೋಪಯೋಗಿ ಮತ್ತು ನೀರಾವರಿ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಬೆಳಗಾಂ ಜಿಲ್ಲೆಯ ಬೈಲಹೊಂಗಲ ತಾಲ್ಲೂಕಿನ ಮ್ಯಾಕಲವಂಡಿ ನೀರಾವರಿ ಕೆರೆ ಕಾಮಗಾರಿಯನ್ನು ಇನ್ನು ಪ್ರಾರಂಭಿಸದಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ

ಆ) ಹಾಗಿದ್ದಲ್ಲಿ ಕೆರೆ ಕಟ್ಟುವ ಕಾಮಗಾರಿಯ ಬಗ್ಗೆ ಸರ್ಕಾರದವರು ಕೈಗೊಂಡ ಕ್ರಮಗಳೇನು?

ಇ) ಈ ಕೆರೆಯಿಂದ ನೀರಾವರಿಯಾಗುವ ಜಮೀನಿನ ವಿಸ್ತೀರ್ಣವೆಷ್ಟು ?

ಶ್ರೀ ಹೆಚ್. ಡಿ. ದೇವೇಗೌಡ (ಲೋಕೋಪಯೋಗಿ ಮತ್ತು ನೀರಾವರಿ ಮಂತ್ರಿಗಳು).—

ಅ) ಹೌದು.

ಆ) ವಿವರವಾದ ಅಂದಾಜು ಮತ್ತು ನಕ್ಷೆಗಳನ್ನು ತಯಾರಿಸಲಾಗಿದ್ದು, ಪರಿಶೀಲನೆಯಲ್ಲಿದೆ.

ಇ) ಸುಮಾರು ೨೫೮ ಹೆಕ್ಟೇರುಗಳು